ಗ್ರಾಮ ಪಂಚಾಯತಿಗಳಿಗೆ ಲೆಕ್ಕ ಪರಿಶೋಧಕರ ನೇಮಕ

486 (193) ಶ್ರೀ ವಸಂತ ಬಂಗೇರ ಕೆ. (ಬೆಳ್ತಂಗಡಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಗ್ರಾಮ ಪಂಚಾಯತ್‌ಗಳಿಗೆ ಲೆಕ್ಕ ಪರಿಶೋಧಕರ ಹುದ್ದೆಗೆ ನೇಮಕಾತಿ ಪ್ರಕ್ರಿಯೆಯನ್ನು ಆರಂಭಿಸಲಾಗಿದೆಯೇ;

ಆ) ರಾಜ್ಯದಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯತ್‌ಗಳಿಗೆ ಯಾವ ಮಾನದಂಡದಲ್ಲಿ ಲೆಕ್ಕಪರಿಶೋಧಕರನ್ನು ನೇಮಿಸಲಾಗುವುದು;

ಇ) ನೇಮಕಾತಿ ಪ್ರಕ್ರಿಯೆಯನ್ನು ಎಂದಿನಿಂದ ಆರಂಭಿಸಲಾಗುವುದು?

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು):–

ಅ) ಗ್ರಾಮ ಪಂಚಾಯಿತಿಗಳಿಗೆ ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ರಾಜ್ಯ ಲೆಕ್ಕಪತ್ರ ಇಲಾಖೆಯಿಂದ ನಿಯೋಜನೆಯ ಮೇಲೆ ನೇಮಿಸಲಾಗುವುದು. ಆದ್ದರಿಂದ ನೇಮಕಾತಿ ಪ್ರಕ್ರಿಯೆ ಆರಂಭಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) ಹೆಚ್ಚಿನ ಆಡಳಿತಾತ್ಮಕ ಹಾಗೂ ಆರ್ಥಿಕ ಜವಾಬ್ದಾರಿಯುಳ್ಳ ಗ್ರಾಮ ಪಂಚಾಯತಿಗಳಲ್ಲಿ ಅಂತಹ ಪ್ರತಿ ಗ್ರಾಮ ಪಂಚಾಯತಿಗೆ ತಲಾ ಒಂದು ಹುದ್ದೆಯಂತೆ ಒಟ್ಟು 2500 ಹುದ್ದೆಗಳಿಗೆ ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ನೇಮಿಸಲಾಗುವುದು.

ಇ) 'ಅ' ಭಾಗಕ್ಕೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

ಗ್ರಾಮ ಪಂಚಾಯತ್ ಕಾರ್ಯದರ್ಶಿಯ ಮಾಹಿತಿ

487 (194) ಶ್ರೀ ವಸಂತ ಬಂಗೇರ ಕೆ. (ಬೆಳ್ತಂಗಡಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಬೆಳ್ತಂಗಡಿ ತಾಲ್ಲೂಕು, ಇಂದುಬೆಟ್ಟ ಗ್ರಾಮ ಪಂಚಾಯತ್‌ನ ಖಾಯಂ ಕಾರ್ಯದರ್ಶಿಯಾಗಿ ಯಾರು ಕರ್ತವ್ಯ ನಿರ್ವಹಿಸುತ್ತಿದ್ದಾರೆ;

ಆ) ಸದರಿಯವರು ಕಳೆದ ಒಂದು ದಶಕಗಳಿಂದ ಕರ್ತವ್ಯಕ್ಕೆ ಗೈರುಹಾಜರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ನಿರಂತರ ಗೈರು ಹಾಜರಾಗಿದ್ದ ಕಾರ್ಯದರ್ಶಿಯವರನ್ನು ನೆರೆಯ ತಾಲ್ಲೂಕಿನಿಂದ ಇಂದುಬೆಟ್ಟ ಗ್ರಾಮ ಪಂಚಾಯಿತಿಗೆ ವರ್ಗಾವಣೆ ಮಾಡಿ ಆದೇಶ ಹೊರಡಿಸಿದ ಕಾರಣವೇನು;

ಈ) ನಿರಂತರ ಗೈರು ಹಾಜರಾದ ಸದರಿ ಕಾರ್ಯದರ್ಶಿಯವರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದೇ?

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು):–

ಅ) ಶ್ರೀ ಆರ್. ಕುಲಕರ್ಣಿ ಇವರ ಅಂತರ ಜಿಲ್ಲಾ ವರ್ಗಾವಣೆಯಿಂದ ದಿನಾಂಕ 13–6–2006 ರಂದು ಇವರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಿದ ನಂತರ ಇಂದಬೆಟ್ಟು ಗ್ರಾಮ ಪಂಚಾಯತ್‌ಗೆ ಖಾಯಂ ಕಾರ್ಯದರ್ಶಿಯನ್ನು ನೇಮಕ ಮಾಡಿರುವುದಿಲ್ಲ. ದಿನಾಂಕ 14–6–2006 ರಿಂದ ಶ್ರೀ ಪುರುಷೋತ್ತಮ, ಕಾರ್ಯದರ್ಶಿ, ಮಾಲಾಡಿ ಗ್ರಾಮ ಪಂಚಾಯತ್, ಇವರನ್ನು ಇಂದಬೆಟ್ಟು ಗ್ರಾಮ ಪಂಚಾಯತ್‌ಗೆ ಹೆಚ್ಚುವರಿ ಪ್ರಭಾರದಲ್ಲಿ ಇಡಲಾಗಿರುತ್ತದೆ.

ಆ) ಗುತ್ತಿಗಾರು ಗ್ರಾಮ ಪಂಚಾಯತಿಯ ಕಾರ್ಯದರ್ಶಿಯಾಗಿದ್ದ ಶ್ರೀ ಮಹಾಂತಯ್ಯ ಅವರು ದಿನಾಂಕ 7–6–1996 ರಿಂದ 12–1–2010ವರೆಗೆ ಅನಧಿಕೃತ ಗೈರು ಹಾಜರಾಗಿದ್ದರು, ಅವರ ವಿರುದ್ಧ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾಪಂಚಾಯತ್, ದಕ್ಷಿಣ ಕನ್ನಡ ಜಿಲ್ಲೆ ರವರ ಕಛೇರಿಯ ಆದೇಶ ಸಂ: ದಕಜಿಪ/ಆಡಳಿತ/ಶಿಸ್ತು/ಸಿಆರ್–18/04/05/ಎ6, ದಿನಾಂಕ 12–01–2010 ರಂತೆ ಇಲಾಖಾ ವಿಚಾರಣೆ ನಡೆಸಿ ಅವರಿಗೆ ರುಜುವಾತುಗೊಂಡ ಅಪಾದನೆಗಾಗಿ ಸೇವೆಯಿಂದ ವಜಾಗೊಳಿಸುವ ದಂಡನೆಯನ್ನು ವಿಧಿಸಲಾಗಿರುತ್ತದೆ.

ಇ) ಶ್ರೀಮತಿ ಪಿ. ಕೆ. ಪದ್ಮಾವತಿ ಎಂಬುವವರು ಅನುಕಂಪದ ಆಧಾರದ ಮೇಲೆ ಗ್ರೇಡ್–11 ಗ್ರಾಮ ಪಂಚಾಯತ್ ಕಾರ್ಯದರ್ಶಿಯಾಗಿ ನೇಮಕಗೊಂಡಿದ್ದು, ಇವರ ಕೌಟುಂಬಿಕ ಹಾಗೂ ವೈಯಕ್ತಿಕ ಹಿನ್ನೆಲೆಯಲ್ಲಿ ತಮ್ಮನ್ನು ಸುಳ್ಯ ತಾಲ್ಲೂಕಿನ ಗುತ್ತಿಗಾರು ಗ್ರಾಮ ಪಂಚಾಯತ್‌ಗೆ ನೇಮಕ ಮಾಡುವಂತೆ ಕೋರಿದ್ದ ಕಾರಣ, ಗುತ್ತಿಗಾರು ಗ್ರಾಮ ಪಂಚಾಯತಿಯ ಶಾಶ್ವತ ಕಾರ್ಯದರ್ಶಿಯಾಗಿದ್ದ ಶ್ರೀ ಮಹಾಂತಯ್ಯ ಅವರು ಗೈರು ಹಾಜರಾಗಿದ್ದರೂ ಸಹ ಅವರ ಹುದ್ದೆಯಲ್ಲಿನ ಹಕ್ಕು ಅದೇ ಗ್ರಾಮ ಪಂಚಾಯತ್‌ನಲ್ಲಿ ಇದ್ದ ಕಾರಣ ಅವರ ಹುದ್ದೆಯ ಮೇಲಿನ ಹಕ್ಕನ್ನು ಬೇರೆ ಪಂಚಾಯತಿಗೆ ಸ್ಥಳಾಂತರಿಸದೆ ಗುತ್ತಿಗಾರು ಗ್ರಾಮ ಪಂಚಾಯತಿಗೆ ಶ್ರೀಮತಿ ಪಿ. ಕೆ. ಪದ್ಮಾವತಿ ಇವರನ್ನುನೇಮಕ ಮಾಡಲು ಅವಕಾಶವಿಲ್ಲ. ಆದ್ದರಿಂದ ಅನಧಿಕೃತ ಗೈರು ಹಾಜರಿಯಾಗಿ ಇಲಾಖಾ ವಿಚಾರಣೆಯನ್ನು ಎದುರಿಸುತ್ತಿದ್ದ ಶ್ರೀ ಮಹಾಂತಯ್ಯ ಅವರ ಹುದ್ದೆಯ ಮೇಲಿನ ಹಕ್ಕನ್ನು ವರ್ಗಾವಣೆ ಆದೇಶ ಮೂಲಕ ಇಂದಬೆಟ್ಟು ಗ್ರಾಮ ಪಂಚಾಯತಿಗೆ ಸ್ಥಳಾಂತರಿಸಲಾಗಿತ್ತು.

ಈ) ಹೌದು, ಮೇಲೆ ತಿಳಿಸಿರುವಂತೆ ಸದರಿ ನೌಕರರ ವಿರುದ್ಧ ಇಲಾಖಾ ವಿಚಾರಣೆ ನಡೆಸಿ, ರುಜುವಾತುಗೊಂಡ ಗೈರು ಹಾಜರಿಯ ಆರೋಪಗಳಿಗಾಗಿ ಸೇವೆಯಿಂದ ವಜಾಗೊಳಿಸುವ ದಂಡನೆಯನ್ನು ಈ ನೌಕರರಿಗೆ ವಿಧಿಸಲಾಗಿದೆ.

ಪಿ.ಎಂ.ಜಿ.ಎಸ್.ವೈ. ಅನುಷ್ಠಾನ

489 (967) ಶ್ರೀ ವೆಂಕಟಶಿವಾರೆಡ್ಡಿ, ಜಿ. ಕೆ. (ಶ್ರೀನಿವಾಸಪುರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಪಿ.ಎಂ.ಜಿ.ಎಸ್.ವೈ. ಯೋಜನೆಯಡಿಯಲ್ಲಿ ಪ್ರತಿ ಮತ ಕ್ಷೇತ್ರವಾರು 50.00 ಕಿ.ಮೀ. ಗಳ ಗ್ರಾಮೀಣ ರಸ್ತೆ ಅಭಿವೃದ್ಧಿ ಪಡಿಸಲು ಯೋಜಿಸಿ, ಇದರಲ್ಲಿ ಕೇವಲ 20.00 ಕಿ.ಮೀ. ಗಳಿಗೆ ಮಾತ್ರ ಸೀಮಿತಗೊಳಿಸಿ ಪ್ರಸ್ತಾವನೆ ಪಡೆಯಲು ಕಾರಣವೇನು;

ಆ) ಈ ನಿಟ್ಟಿನಲ್ಲಿ ಕ್ಷೇತ್ರವಾರು ಬಿಡುಗಡೆ ಮಾಡಿರುವ ಅನುದಾನ ಹಾಗೂ ಅಭಿವೃದ್ಧಿಪಡಿಸಲು ಯೋಜಿಸಿರುವ ಕ್ರಮದಲ್ಲಿ ಪಕ್ಷಪಾತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ಅಂಕಿವಾರು ವಿವರ ಒದಗಿಸುವುದು);

ಇ) ಈ ಲೆಕ್ಕ ಶೀರ್ಷಿಕೆಯಡಿಯಲ್ಲಿ ಬಿಡುಗಡೆಯಾಗಿರುವ ಪ್ರತಿ ಮತಕ್ಷೇತ್ರವಾರು ಅನುದಾನ ಹಾಗೂ ಅನುಷ್ಠಾನದ ಹಂತದ ವಿವರಗಳನ್ನು ಒದಗಿಸುವುದು?

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):–

ಅ) ಪ್ರದಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ಪ್ರತಿ ಮತ ಕ್ಷೇತ್ರವಾರು 50 ಕಿ.ಮೀ. ಗ್ರಾಮೀಣ ರಸ್ತೆ ಅಭಿವೃದ್ಧಿ ಪಡಿಸುವ ಯಾವುದೇ ನಿರ್ದಿಷ್ಟ ಕಾರ್ಯಕ್ರಮ ಇರುವುದಿಲ್ಲ. ಆದರೆ, ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಮಾನದಂಡಗಳನ್ನು ಅನುಸರಿಸಿ,ಪ್ರತಿ ಗ್ರಾಮೀಣ ವಿಧಾನ ಸಭಾ ಮತ ಕ್ಷೇತ್ರದಲ್ಲಿ 50 ಕಿ.ಮೀ. ನಂತೆ ಸುಮರು 10,000 ಕಿ.ಮೀ. ರಸ್ತೆ ಅಭಿವೃದ್ಧಿಪಡಿಸುವ ಒಂದು ನೂತನ ಯೋಜನೆಯ್ನು ಜಾರಿಗೊಳಿಸಲು ಯೋಜಿಸಿ, ಅದರಂತೆ 2010–11ನೇ ಸಾಲಿನಲ್ಲಿ ಈ ಕಾರ್ಯಕ್ರಮ ಪ್ರಾರಂಭಿಸಲು ಆಯವ್ಯಯ ಭಾಷಣದಲ್ಲಿ 5000 ಕಿ.ಮೀ. ರಸ್ತೆ ಅಭಿವೃದ್ಧಿ ಪಡಿಸಲು ಪ್ರಸ್ತಾವಿಸಲಾಗಿದೆ. ಇದನ್ನು ಹಂತ ಹಂತವಾಗಿ ಕೈಗೊಳ್ಳಬೇಕಾಗಿದ್ದು, ಪ್ರಥಮ ಹಂತದಲ್ಲಿ ಪ್ರತಿ ವಿಧಾನ ಸಭಾ ಕ್ಷೇತ್ರದ 20 ಕಿ.ಮೀ. ರಸ್ತೆಯನ್ನು ಅಭಿವೃದ್ಧಿ ಪಡಿಸಲು ವಿವರವಾದ ಯೋಜನಾ ವರದಿಗಳನ್ನು (DPRs) ತಯಾರಿಸಲಾಗಿದೆ.